ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

ಅಧೀಕ್ಷಕ ಅಭಿಯಂತರವರ ಕಛೇರಿ, ದಾಸರಹಳ್ಳಿ ವಲಯ
ಎಂ.ಇ.ಐ.ಬಡಾವಣೆ,ಬಾಗಲಗುಂಟೆ,ಹೆಸರಘಟ್ಟ ಮುಖ್ಯರಸ್ತೆ,ಬೆಂಗಳೂರು -560073

ಪಸ್ಥಅ.ಅ.(ದಾ)ತಾ.ಮ./ 70 /2020-21 ದಿನಾಂಕ: 11/08/20

"ತಾಂತ್ರಿಕ ಮಂಜೂರಾತಿ ಪತ್ರ"

ಕಾಮಗಾರಿಯ ಹೆಸರು:- Improvements to Roads and Drians In Bhuvaneshwari Nagara And Other Area In Bagalagunte Ward No 14 ಕಾಮಗಾರಿಗೆ ತಾಂತ್ರಿಕ ಮಂಜೂರಾತಿ ನೀಡುವ ಬಗ್ಗೆ.

ಉಲ್ಲೇಖ:- ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ) ರವರ ಆಡಳಿತಾತ್ಮಕ ಮಂಜೂರಾತಿ ಸಂಖ್ಯೆ:ಕಾ.ಪಾ.ಅ./ಆ.ಆ/110/2020-21, ದಿನಾಂಕ: 29.07.2020

ಪ್ರಸ್ತಾವನೆ:-

ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ) ರವರು ಮೇಲ್ಕಂಡ ಕಾಮಗಾರಿಯ ಅಂದಾಜು ಪಟ್ಟಿಯನ್ನು ರೂ.90.00 ಲಕ್ಷಗಳ ಮೊತ್ತಕ್ಕೆ ತಯಾರಿಸಿ, ಉಲ್ಲೇಖದಂತೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು ತಾಂತ್ರಿಕ ಮಂಜೂರಾತಿ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ) ರವರ ಪ್ರಸ್ತಾವನೆಯನ್ನು ಪರಿಗಣಿಸಿ ಈ ಕೆಳಕಂಡ ಆದೇಶ ಹೊರಡಿಸಲಾಗಿದೆ.

ಸದರಿ Improvements to Roads and Drians In Bhuvaneshwari Nagara And Other Area In Bagalagunte Ward No 14 ಕಾಮಗಾರಿಯ ಅಂದಾಜು ಮೊತ್ತ ರೂ.90.00 ಲಕ್ಷಗಳ ಮೊತ್ತಕ್ಕೆ 2018-19ನೇ ಸಾಲಿನ ಆಯವ್ಯಯ P-3485ರಲ್ಲಿ ಮೀಸಲಿಟ್ಟಿರುವ ಅನದಾನದಡಿಯಲ್ಲಿ ಜಾಬ್ ಸಂಖ್ಯೆ 014-21-000004 ನೀಡಲಾಗಿರುತ್ತದೆ. ಸದರಿ ಅಂದಾಜು ಪಟ್ಟಿಗೆ ಈ ಕಛೇರಿ ತಾಂತ್ರಿಕ ಮಂಜೂರಾತಿ ದಾಖಲಾತಿಯ ವಹಿಯ ಕ್ರಮ ಸಂಖ್ಯೆ 70 ಮತ್ತು ಪುಟ ಸಂಖ್ಯೆ: 39 ರಲ್ಲಿ ನೊಂದಾಯಿಸಿ ರೂ.90.00 ಲಕ್ಷಗಳಿಗೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ತಾಂತ್ರಿಕ ಮಂಜೂರಾತಿಯನ್ನು ನೀಡಲಾಗಿದೆ.

ಷರತ್ತುಗಳು:

1. ಈ ಹಿಂದೆ ತಾಂತ್ರಿಕ ಮಂಜೂರಾತಿ ಅನುಮೋದನೆ ನೀಡಲಾದ ಅಂದಾಜುಗಳಲ್ಲಿನ ಬಾಬ್ತುಗಳು ಮತ್ತು ಬಾಬ್ತುಗಳ ಪರಿಮಾಣಗಳು ಈ ಅಂದಾಜಿನಲ್ಲಿ ಮರುಕಳಿಸದಿರುವುದಕ್ಕೆ ಪರಿಶೀಲಿಸಿ, ಧೃಡಿಕರಿಸಿಕೊಂಡು ನಂತರವೇ ಈ ಕಾಮಗಾರಿಗಳನ್ನು ಕೈಗೊಳ್ಳುವಲ್ಲಿ ಸೂಕ್ತ ಕ್ರಮ ಅನುಸರಿಸತಕ್ಕದ್ದು.
2. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ಮತ್ತು ನಿಮಯ 2000 ಪ್ರಕಾರ ಕಾಗಾರಿಯ ಟೆಂಡರ್ ಕರೆಯುವಲ್ಲಿ ಸೂಕ್ತ ಕ್ರಮ ಅನುಸರಿಸತಕ್ಕದ್ದು.
3. ಅಂದಾಜುಪಟ್ಟಿಯ ಮೊತ್ತವು ಮಂಜೂರಾತಿಯಾದ ಮೊತ್ತಕ್ಕಿಂತ ಮೀರಬಾರದು, ಹಾಗೂ ಕಾಮಗಾರಿಗೆ ಮಂಜೂರಾದ ಮೊತ್ತದ ಹಣವನ್ನು ಅದೇ ಕಾಮಗಾರಿಗೆ ಉಪಯೋಗಿಸತಕ್ಕದು.
4. ಕಾಮಗಾರಿಯನ್ನು ಐ.ಆರ್.ಸಿ/ಐ.ಎಸ್. ಮಾರ್ಗ ಸೂಚಿಗಳಂತೆ, ಮತ್ತು ನಿಗದಿತ ವಿಶಿಷ್ಟ ವಿವರಣೆಯ (Standard Specification) ಪ್ರಕಾರ ನಿರ್ವಹಿಸತಕ್ಕದು.
5. ಕಾಮಗಾರಿ ಪೂರ್ಣಗೊಂಡ ನಂತರ ನಿಗಧಿತ ಅವಧಿಯೊಳಗೆ ಯುಟಿಲೈಜೇಷನ್ ಪ್ರಮಾಣ ಪತ್ರ ಹಾಗೂ ಕಾಮಗಾರಿ ಪೂರ್ಣಗೊಂಡ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದು.
6. ಮಂಜೂರಾದ ಕಾಮಗಾರಿಯಲ್ಲಿ ಯಾವುದೇ ಬದಲಾವಣೆ ಅಥವಾ ಮಾರ್ಪಾಡು ಆಗಿದಲ್ಲಿ ಅನುಷ್ಠಾನ ಅಧಿಕಾರಿಗಳೇ ಜವಾಬ್ದಾರರಾಗಿರುತ್ತಾರೆ.
7. ತಳಪಾಯದ ವಿನ್ಯಾಸವನ್ನು ಸಿದ್ಧಗೊಳಿಸಿ ಕೆಲಸ ಆರಂಭಿಸುವ ಮುನ್ನ ಈ ಕಛೇರಿಯ ಒಪ್ಪಿಗೆಯನ್ನು ಪಡೆಯಯತಕ್ಕದ್ದು.

560073. Street

Scanned with Oken Scanner

8. ಸದರಿ ಕಾಮಗಾರಿಗೆ ನಿಗದಿತ ನಿವೇಶನ ಅಭ್ಯಸಿಕೆ ಬಗ್ಗೆ ಮಂಡಳಿ ತಜ್ಞರು ಮಾಡುವ ಮುನ್ಸೂಚನೆಯಂತೆ ಕೈಗೊಳ್ಳತಕ್ಕದ್ದು.

9. ನಿರ್ದಿಷ್ಟ ದರಪಟ್ಟಿಯಲ್ಲಿರುವ ಅಳತೆಗಳ (Data Rate) ಮತ್ತು ದರ ವಿಶ್ಲೇಷಣೆಗಳ (Rate Analysis) ಕ್ಷೇತ್ರ ಪರಿಸ್ಥಿತಿಗನುಗುಣವಾಗಿ ಅಳವಡಿಸುವ ಪದ್ಧತಿ ತಜ್ಞರದ್ದು.

10. ಅಂದಾಜು ಪತ್ರಿಕೆಯಲ್ಲಿ ಅಳವಡಿಸಿರುವ ಇತರೆಯಾವ ಕೆಲಸಗಳಲ್ಲಿ ಒಳಗೊಳ್ಳಿಸಿರುವ (Lumpsum Provisions) ಮೊತ್ತಗಳಿಗೆ ಅಂತಿಮ ಅಂದಾಜನ್ನು ತಯಾರಿಸಿ ಅನುಮೋದನೆ ಪಡೆಯತಕ್ಕದ್ದು.

11. ಸದರಿ ಕಾಮಗಾರಿಗೆ ಟೆಂಡರ್ ಆಹ್ವಾನಿಸುವಾಗ Stander Tender Document KW-1/2/3/4 ಹಾಗೂ ಅನಂತರ ಹೊರಡಿಸುವ ತಿದ್ದುಪಡಿಗಳನ್ನು ಅಳವಡಿಸಿಕೊಂಡು ಟೆಂಡರ್ ಆಹ್ವಾನಿಸತಕ್ಕದ್ದು.

12. ತಯಾರಿಸಲಾಗುವ ಉಪಯುಕ್ತ ಸಾಮಾಗ್ರಿಗಳ ಬಗ್ಗೆ MAS ನ ಪಟ್ಟಿಯಲ್ಲಿ ದಾಖಲಿಸುವುದು ಹಾಗೂ ಈ ತರಹದ ಉಪಯುಕ್ತ ಸಾಮಾಗ್ರಿಗಳನ್ನು ಬೇರೆಕಾಮಗಾರಿಯಲ್ಲಿ ಉಪಯೋಗಿಸುವ (ಮರು ಬಳಕೆ ಮಾಡುವ) ಬಗ್ಗೆ ಪ್ರತ್ಯೇಕ ಪಟ್ಟಿಯಲ್ಲಿ ದಾಖಲಿಸಿ ಧೃಢೀಕರಿಸಿಕೊಳ್ಳುವುದು.

13. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವರ್ಗದವರಿಗೆ ಕಾಮಗಾರಿಯ ಟೆಂಡರ್‌ನಲ್ಲಿ ಭಾಗವಹಿಸುವ ಬಗ್ಗೆ ಹೊಸ ಆಯುಕ್ತರವರ ದಿನಾಂಕ:02/11/2017ರ ಆಂತರಿಕ ಕಛೇರಿ ಜ್ಞಾಪನೆ ಸಂಖ್ಯೆ:ಆ.ಹಿ.ಅ/3054/2017-18 ರಂತೆ ಕ್ರಮವಹಿಸುವುದು.

ಅಧೀಕ್ಷಕ ಅಭಿಯಂತರರು (ದಾಸರಹಳ್ಳಿ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು
1.ಕಾರ್ಯಪಾಲಕ ಅಭಿಯಂತರರು, (ದಾಸರಹಳ್ಳಿ) ರವರ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
2.ಮುಖ್ಯ ಲೆಕ್ಕಾಧಿಕಾರಿಯವರ ಗಮನಕ್ಕೆ ಕಳುಹಿಸಿದೆ.
3.ಕಡತ ಕಡತಕ್ಕೆ

Scanned with Oken Scanner